ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: [illegible]

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 10/7/20

# ವೆಚ್ಚ ಮಿತಿ ಹೆಚ್ಚಳ

ಉ.ವಾ 10/7/20

## ಕೊರೊನಾ ನಿಧಿ 500 ಕೋಟಿ ರೂ.ವರೆಗೆ ವೆಚ್ಚಕ್ಕೆ ಒಪ್ಪಿಗೆ
## ಆಸ್ಪತ್ರೆಗಳಲ್ಲಿ ಮೂಲಸೌಕರ್ಯಕ್ಕೆ 207 ಕೋಟಿ ರೂ.

**ಬೆಂಗಳೂರು:** ಕೊರೊನಾ ಸಂಕಷ್ಟದಿಂದಾಗಿ ಶ್ರಮಿಕ ವರ್ಗದವರಿಗೆ ಹಾಗೂ ರೈತರಿಗೆ ಪ್ಯಾಕೇಜ್ ಘೋಷಿಸಿರುವ ಹಿನ್ನೆಲೆಯಲ್ಲಿ ವಿಪತ್ತು ಪರಿಹಾರ ನಿಧಿಯನ್ನು 500 ಕೋಟಿ ರೂಪಾಯಿಗೆ ಹೆಚ್ಚಿಸಿ ಸುಗ್ರೀವಾಜ್ಞೆ ಹೊರಡಿಸಲು ರಾಜ್ಯ ಸಚಿವ ಸಂಪುಟ ತೀರ್ಮಾನಿಸಿದೆ.

ಕೊರೊನಾ ಸೋಂಕಿತರಿಗೆ ಚಿಕಿತ್ಸೆ ನೀಡಲು ತಾಲೂಕು ಹಾಗೂ ಜಿಲ್ಲಾಸ್ಪತ್ರೆಗಳಿಗೆ ಹಾಸಿಗೆ ಸಾಮರ್ಥ್ಯ ಹೆಚ್ಚಳ ಸೇರಿ ಇತರೆ ಮೂಲ ಸೌಕರ್ಯ ಕಲ್ಪಿಸಲು 207.98 ಕೋಟಿ ರೂ., ಸಾರ್ವಜನಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯಕೀಯ ಉಪಕರಣ ಹಾಗೂ ಪೀಠೋಪಕರಣ ಖರೀದಿಗೆ 81.99 ಕೋಟಿ ರೂ. ವೆಚ್ಚಕ್ಕೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅಧ್ಯಕ್ಷತೆಯಲ್ಲಿ ನಡೆದ ಸಂಪುಟ ಒಪ್ಪಿಗೆ ನೀಡಿದೆ.

- **ಎಪಿಎಂಸಿ ಸೆಸ್ ಶೇ.1 ಕ್ಕೆ ಇಳಿಕೆ**
- **ಲೋಕಾಯುಕ್ತ ಕಾಯ್ದೆಗೆ ತಿದ್ದುಪಡಿಗೆ ತೀರ್ಮಾನ**

ಸಂಪುಟ ಸಭೆಯ ನಂತರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ. ಮಾಧುಸ್ವಾಮಿ, ಈ ಹಿಂದೆ ವಿಪತ್ತು ಪರಿಹಾರ ನಿಧಿ (ಸಾಧಿಲ್ವಾರು ವೆಚ್ಚ) 80 ಕೋಟಿ ರೂ.ವರೆಗೆ ವೆಚ್ಚ ಮಾಡಲು ಅವಕಾಶವಿತ್ತು. ಕೊರೊನಾ ಹಿನ್ನೆಲೆಯಲ್ಲಿ ಶ್ರಮಿಕ ವರ್ಗ, ಹಣ್ಣು ತರಕಾರಿ ಹೂವು ಬೆಳೆದ ರೈತರಿಗೆ ಪರಿಹಾರ ವಿತರಿಸಲು ಹಣಕಾಸು ಲಭ್ಯತೆ ಅಗತ್ಯವಾಗಿರುವುದರಿಂದ ಈ ಮೊತ್ತವನ್ನು 500 ಕೋಟಿ ರೂ.ಗೆ ಏರಿಸಲು ಸಂಪುಟ ಒಪ್ಪಿದೆ. ತತ್‌ಕ್ಷಣಕ್ಕೆ ಅದು ಜಾರಿಯಾಗಬೇಕಾಗಿರುವುದರಿಂದ ಸುಗ್ರೀವಾಜ್ಞೆ ತರಲು ತೀರ್ಮಾನಿಸಲಾಯಿತು ಎಂದರು.

**ವಿದ್ಯುತ್ ಸರಬರಾಜು ಕಂಪನಿಗಳಿಗೆ ಸಾಲ:** ಬೆಸ್ಕಾಂ ಸೇರಿದಂತೆ ಐದು ವಿದ್ಯುತ್ ಸರಬರಾಜು ಕಂಪನಿಗಳು ವಿದ್ಯುತ್ ಖರೀದಿಗಾಗಿ ಬೇರೆ ಬೇರೆ ಕಡೆಯಿಂದ ಸಾಲ ಪಡೆದಿದ್ದವು. ಸಕಾಲದಲ್ಲಿ ಪಾವತಿ ಮಾಡದಿದ್ದರೆ ಶಾಶ್ವತ ಎನ್‌ಪಿಎ ಆಗುತ್ತಿದ್ದವು. ಹೀಗಾಗಿ, ಐದು ಕಂಪನಿಗಳಿಗೆ 2500 ಕೋಟಿ ರೂ. ಬಡ್ಡಿ ರಹಿತ ಸಾಲ ಮಂಜೂರು ಮಾಡಲು ಸಂಪುಟ ಒಪ್ಪಿದೆ. ಈ ಪೈಕಿ ಬೆಸ್ಕಾಂಗೆ 500 ಕೋಟಿ ರೂ., ಹೆಸ್ಕಾಂಗೆ 400 ಕೋಟಿ ರೂ., ಚಾಮುಂಡೇಶ್ವರಿ ವಿದ್ಯುತ್ ನಿಗಮಕ್ಕೆ 600 ಕೋಟಿ ರೂ. ಸೇರಿದೆ ಎಂದು ತಿಳಿಸಿದರು.

ಕವಿಕಾ ಮತ್ತು ಎಂಎಎ ಎಲೆಕ್ಟ್ರಿಕಲ್ ಕಂಪನಿಗಳು ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ ವ್ಯಾಪ್ತಿಯಲ್ಲಿದ್ದು ಅಲ್ಲಿ ತಯಾರಾದ ಶೇ.99 ಉತ್ಪನ್ನಗಳನ್ನು ಸರ್ಕಾರವೇ ಖರೀದಿಸುತ್ತಿದೆ. ತೆರಿಗೆ ಉಳಿತಾಯ ಸೇರಿ ಇತರೆ ಆಡಳಿತಾತ್ಮಕ ವೆಚ್ಚ ಕಡಿಮೆ ಮಾಡಲು ಎರಡೂ ಕಂಪನಿ ಆಡಳಿತವನ್ನು ಇಂಧನ ಇಲಾಖೆ ವ್ಯಾಪ್ತಿಗೆ ತರಲು ಸಂಪುಟ ತೀರ್ಮಾನಿಸಿದೆ ಎಂದು ಹೇಳಿದರು.

### ಗುತ್ತಿಗೆ ವೈದ್ಯರಿಗೆ ಅನುಕೂಲ

ಗುತ್ತಿಗೆ ವೈದ್ಯರ ಖಾಯಂ ನೇಮಕಾತಿ ವಿಷಯವೂ ಸಂಪುಟದಲ್ಲಿ ಚರ್ಚಿಸಿ 6 ತಿಂಗಳಿಗೂ ಹೆಚ್ಚು ಕಾಲ ಕೆಲಸ ಮಾಡಿರುವವರಿಗೆ ಕನಿಷ್ಠ 2.5 ರಿಂದ 30 ವರೆಗೆ ಅವರ ಸೇವಾವಧಿ ಆಧಾರದ ಮೇಲೆ ಕೃಪಾಂಕ ನೀಡಲು ಒಪ್ಪಿಗೆ ನೀಡಲಾಗಿದೆ. ವಯೋಮಿತಿ ಸಹ 21 ವರ್ಷದಿಂದ 26 ವರ್ಷದವರೆಗೆ ವಿಸ್ತರಿಸಲಾಗಿದೆ. ಇದು ಆಯುಷ್ ವೈದ್ಯರಿಗೂ ಅನ್ವಯವಾಗಲಿದೆ ಎಂದು ಹೇಳಿದರು. ಈ ಹಿಂದೆ ಕೃಪಾಂಕ ಕನಿಷ್ಠ 2ರಿಂದ 20 ಅಂಕದವರೆಗೆ ನೀಡಲು ತೀರ್ಮಾನಿಸಲಾಗಿತ್ತು. ವಯೋಮಿತಿ ವಿಸ್ತರಣೆ ಮಾಡಿರಲಿಲ್ಲ, ಬೇಡಿಕೆ ಹಿನ್ನೆಲೆಯಲ್ಲಿ ಇದೀಗ 30 ಅಂಕದವರೆಗೆ ಕೃಪಾಂಕ ಹಾಗೂ ವಯೋಮಿತಿ ವಿಸ್ತರಣೆಗೆ ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.

### ಸೆಸ್ ಇಳಿಕೆ

ಎಪಿಎಂಸಿ ಕಾಯ್ದೆಗೆ ತಿದ್ದುಪಡಿ ತಂದ ನಂತರ ಯಾರು ಎಲ್ಲಿ ಬೇಕಾದರೂ ಖರೀದಿ ಹಾಗೂ ಮಾರಾಟಕ್ಕೆ ಅವಕಾಶ ಕಲ್ಪಿಸಿರುವುದರಿಂದ ಎಪಿಎಂಸಿ ಮಾರುಕಟ್ಟೆ ಶುಲ್ಕ ಕಡಿಮೆ ಮಾಡಬೇಕು ಎಂಬ ವರ್ತಕರ ಬೇಡಿಕೆ ಹಿನ್ನೆಲೆಯಲ್ಲಿ ಎಪಿಎಂಸಿ ಸೆಸ್ ಶೇ.1.5 ರಿಂದ ಶೇ.1 ಕ್ಕೆ ಇಳಿಸಲು ಸಂಪುಟ ತೀರ್ಮಾನಿಸಿದೆ.

### ಬೆಂಗಳೂರಲ್ಲಿ ಬಯೋಟೆಕ್ ಪಾರ್ಕ್

ಬಹಳ ವರ್ಷಗಳಿಂದ ನನೆಗುದಿಗೆ ಬಿದ್ದಿದ್ದ ಬೆಂಗಳೂರು ಬಯೋಟೆಕ್ ಪಾರ್ಕ್ ಅಭಿವೃದ್ಧಿ ಸಂಬಂಧ ಮೆಕ್ಕೋನ್ ಎಲೆಕ್ಟ್ರಾನಿಕ್ಸ್ ಸಿಟಿ ಲಿಮಿಟೆಡ್‌ಗೆ ಕ್ಲಸ್ಟರ್ ಸ್ಥಾಪನೆ ಯೋಜನೆಯಂತೆ ಕಾಮಗಾರಿ ವಹಿಸಲು ಸಂಪುಟ ತೀರ್ಮಾನಿಸಿತು ಎಂದು ವಿವರಿಸಿದರು. ತಿಪಟೂರಿನಲ್ಲಿ ಗಂಗಾಪುರ ಕ್ಷೇತ್ರಕ್ಕೆ 50 ವರ್ಷಗಳ ಹಿಂದೆ ಗುತ್ತಿಗೆಗೆ ನೀಡಲಾಗಿದ್ದ 4.34 ಎಕರೆ ಜಮೀನು ಗುತ್ತಿಗೆ ಅವಧಿ ಮುಗಿದಿದ್ದು ಖಾಯಂ ಆಗಿ ಅವರಿಗೇ ಮಾರ್ಗಸೂಚಿ ದರದ ಶೇ.50 ರಷ್ಟು ಪಡೆದು ಕೊಡಲು ಸಂಪುಟ ಒಪ್ಪಿಗೆ ನೀಡಿದೆ ಎಂದು ತಿಳಿಸಿದರು.

### ರಾಜಧಾನಿಗೆ ಅಷ್ಟದಿಕ್ಪಾಲಕರು

**ಬೆಂ**ಗಳೂರಿನಲ್ಲಿ ಕೊರೊನಾ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವ ಬಗ್ಗೆ ಸಂಪುಟ ಸಭೆಯಲ್ಲೂ ಆತಂಕ ವ್ಯಕ್ತವಾಯಿತು. ಕೊರೊನಾ ನಿಯಂತ್ರಣಕ್ಕಾಗಿ ಬೆಂಗಳೂರನ್ನು ಎಂಟು ವಲಯಗಳನ್ನಾಗಿ ಮಾಡಿ, ಇವುಗಳಿಗೆ ಒಬ್ಬೊಬ್ಬ ಸಚಿವರನ್ನು ಉಸ್ತುವಾರಿಗಳನ್ನಾಗಿ ಮಾಡಲು ನಿರ್ಧರಿಸಲಾಯಿತು.

ಕೊರೊನಾ ನಿಯಂತ್ರಣ, ಪರೀಕ್ಷೆ, ತಪಾಸಣೆ, ಚಿಕಿತ್ಸೆಗೆ ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳಬೇಕು. ಮೊದಲಿಗೆ ನಿಯಂತ್ರಣದಲ್ಲಿದ್ದ ಕೊರೊನಾ ಇದೀಗ ತೀವ್ರವಾಗಿ ವ್ಯಾಪಿಸುತ್ತಿರುವುದು ಸಾರ್ವಜನಿಕರಲ್ಲಿ ಭಯ ಉಂಟು ಮಾಡಿದೆ. ಕೆಲವೆಡೆ ಊರು ಬಿಟ್ಟು ಹೋಗುತ್ತಿರುವುದು ಕಂಡು ಬರುತ್ತಿದೆ ಎಂದು ಸಂಪುಟ ಸದಸ್ಯರು ಆತಂಕ ವ್ಯಕ್ತಪಡಿಸಿದರು.

ಮುಖ್ಯಮಂತ್ರಿ ಯಡಿಯೂರಪ್ಪ ಹಾಗೂ, ಕೊರೊನಾ ನಿರ್ವಹಣೆ ಉಸ್ತುವಾರಿ ವಹಿಸಿಕೊಂಡಿರುವ ಸಚಿವರು ಕೊರೊನಾ ನಿಯಂತ್ರಣಕ್ಕೆ ಕೈಗೊಂಡಿರುವ ಕ್ರಮಗಳ ಬಗ್ಗೆ ವಿವರಿಸಿ ಯಾವುದೇ ಪರಿಸ್ಥಿತಿ ನಿಭಾಯಿಸಲು ಸಜ್ಜಾಗಿದ್ದೇವೆ. ಆತಂಕ ಬೇಡ. ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿ ಭಯ ನಿವಾರಿಸುವ ಕೆಲಸ ಮಾಡೋಣ ಎಂದು ಹೇಳಿದರು ಎನ್ನಲಾಗಿದೆ. ಜತೆಗೆ, ಬೆಂಗಳೂರಿನಲ್ಲಿ ಕೊರೊನಾ ನಿಯಂತ್ರಣಕ್ಕೆ ಶನಿವಾರ ಹಾಗೂ ಭಾನುವಾರ ಲಾಕ್‌ಡೌನ್ ಸೇರಿದಂತೆ ಕೆಲವು ನಿಯಂತ್ರಣ ಕ್ರಮಗಳ ಬಗ್ಗೆ ಪ್ರಸ್ತಾಪವಾಯಿತು.

## ಮತ್ತೆ 2,228 ಕೊರೊನಾ ಕೇಸ್, 6ನೇ ಸ್ಥಾನಕ್ಕೆ ಕರ್ನಾಟಕ

**ರಾ**ಜ್ಯದಲ್ಲಿ ಕೊರೊನಾ ಆರ್ಭಟ ಜೋರಾಗಿಯೇ ಇದೆ. ಗುರುವಾರ ಮತ್ತೆ 2,228 ಹೊಸ ಕೊರೊನಾ ಪ್ರಕರಣಗಳು ದೃಢಪಟ್ಟಿವೆ. ಈ ಮೂಲಕ ರಾಜ್ಯದ ಒಟ್ಟಾರೆ ಪ್ರಕರಣ 31,105ಕ್ಕೆ ತಲುಪಿದೆ. ಹಾಗೆಯೇ ದೇಶದ ಲೆಕ್ಕಾಚಾರದಲ್ಲೇ ಆರನೇ ಸ್ಥಾನಕ್ಕೆ ಕರ್ನಾಟಕ ತಲುಪಿದೆ. ಇನ್ನು ಬೆಂಗಳೂರೊಂದರಲ್ಲೇ 1,373 ಕೇಸ್‌ಗಳು ಪತ್ತೆಯಾಗಿದ್ದು ಹೆಚ್ಚಿನ ಆತಂಕಕ್ಕೆ ಕಾರಣವಾಗಿದೆ. ಉಳಿದಂತೆ ದಕ್ಷಿಣ ಕನ್ನಡದಲ್ಲಿ 167, ಕಲಬುರಗಿಯಲ್ಲಿ 85, ಧಾರವಾಡದಲ್ಲಿ 75, ಮೈಸೂರಿನಲ್ಲಿ 52 ಕೇಸುಗಳು ದೃಢಪಟ್ಟಿವೆ. ಗುರುವಾರದ ಪ್ರಕರಣಗಳೊಂದಿಗೆ ರಾಜ್ಯದಲ್ಲಿ ಒಟ್ಟು 17,778 ಸಕ್ರಿಯ ಕೇಸ್‌ಗಳಿವೆ. ಹಾಗೆಯೇ ರಾಜ್ಯದಲ್ಲಿ ಮತ್ತೆ 17 ಮಂದಿ ಮೃತಪಟ್ಟಿದ್ದಾರೆ ಎಂದು ಆರೋಗ್ಯ ಇಲಾಖೆ ವರದಿ ತಿಳಿಸಿದೆ. ಈ ಮಧ್ಯೆ ಸಮಾಧಾನಕರ ವಿಚಾರವೆಂದರೆ, ಗುರುವಾರ 957 ಮಂದಿ ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ. ಬೆಂಗಳೂರಿನಲ್ಲೇ 606 ಮಂದಿ ಡಿಸ್ಚಾರ್ಜ್ ಆಗಿ ಮನೆಗೆ ತೆರಳಿದ್ದಾರೆ. ಈ ಮೂಲಕ ಒಟ್ಟಾರೆಯಾಗಿ ಆಸ್ಪತ್ರೆಯಿಂದ ಬಿಡುಗಡೆ ಹೊಂದಿದವರ ಸಂಖ್ಯೆ 12,833ಕ್ಕೆ ತಲುಪಿದೆ. ಹಾಗೆಯೇ 457 ಮಂದಿ ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.